## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಯಲ್ಲವ್ವ ಸತ್ಯಪ್ಪ ಚೂರಿ, ಅಧ್ಯಕ್ಷರು, ಫಕೀರಬೂದಿಹಾಳ ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ ಇವರ ಪತ್ರ ಸಂಖ್ಯೆ: ಜಿಪಂಬಾ/ಎಡಿ-10/ಗ್ರಾಪಂ/ವಿನಿದಿ-1010/2018-19/1973, ದಿನಾಂಕ:06.9.2019.
2. ಸರ್ಕಾರದ ಆದೇಶ ಪತ್ರ ಸಂಖ್ಯೆ:ಗ್ರಾಅಪ 1135 ಗ್ರಾಪಂಅ 208, ದಿನಾಂಕ:02.02.2019.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 300 ಗ್ರಾಪಂಅ 2020, ದಿನಾಂಕ:21.05.2020.
4. ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರ ಪತ್ರ ಸಂಖ್ಯೆ: ಪ್ರಾಆಬೆ:ಜಿಪಂ:43(ಎ):ಸಿಆರ್-05:2020-21, ದಿನಾಂಕ: 04.08.2020.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 300 ಗ್ರಾಪಂಅ 2020, ದಿನಾಂಕ:30.09.2020.
6. ಶ್ರೀಮತಿ ಯಲ್ಲವ್ವ ಸತ್ಯಪ್ಪ ಚೂರಿ, ಹಿಂದಿನ ಅಧ್ಯಕ್ಷರು, ಫಕೀರಬೂದಿಹಾಳ ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ಲಿಖಿತ ಸಮಜಾಯಿಷಿ ದಿನಾಂಕ:14.10.2020.
7. ಸರ್ಕಾರದ ವಿಚಾರಣಾ ನೋಟೀಸು ಸಂಖ್ಯೆ: ಗ್ರಾಅಪ 300 ಗ್ರಾಪಂಅ 2020, ದಿನಾಂಕ: 13.01.2021.

***

ಶ್ರೀಮತಿ ಯಲ್ಲವ್ವ ಸತ್ಯಪ್ಪ ಚೂರಿ, ಅಧ್ಯಕ್ಷರು, ಫಕೀರಬೂದಿಹಾಳ ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ತಮ್ಮ ಅಧಿಕಾರಾವಧಿಯಲ್ಲಿ ಈ ಕೆಳಕಂಡ ಆರೋಪಗಳನ್ನು ಎಸಗಿರುವುದಾಗಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬಾಗಲಕೋಟೆ ಜಿಲ್ಲೆ ರವರು ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

**ದೋಷಾರೋಪಣೆ:-**

ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಫಕೀರಬೂದಿಹಾಳ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀಮತಿ ಯಲ್ಲವ್ವ ಸತ್ಯಪ್ಪ ಚೂರಿ ಇವರು ಫಕೀರಬೂದಿಹಾಳ ಗ್ರಾಮ ಪಂಚಾಯಿತಿಗೆ ಸಂಬಂಧಿಸಿದಂತೆ, ಗ್ರಾಮ ಸಭೆಗಳನ್ನು ಕರೆಯಲು ದಿನಾಂಕ ಗೊತ್ತುಪಡಿಸುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಟಿಪ್ಪಣಿಯನ್ನು ಕಳುಹಿಸಿದಾಗ ದಿನಾಂಕ ನೀಡದೇ ರುಜು ಮಾಡಲು ನಿರಾಕರಿಸಿರುತ್ತಾರೆ ಹಾಗೂ ಸಿಬ್ಬಂದಿಗಳ ವೇತನ ಬಿಲ್ಲಿನ ಚೆಕ್‌ಗೆ ಸಹಿ ಮಾಡಲು ನಿರಾಕರಿಸಿರುತ್ತಾರೆ. ಈ ಕಾರಣದಿಂದ ಒಬ್ಬ ಸಿಬ್ಬಂದಿಯು ಆತ್ಮಹತ್ಯೆ ಮಾಡಿಕೊಂಡಿರುತ್ತಾರೆ. ಮುಂದುವರೆದು ಅಧ್ಯಕ್ಷರು 14 ನೇ ಹಣಕಾಸು ಹಾಗೂ ವರ್ಗ-01 ಯೋಜನೆಗಳ ಖರ್ಚು ವೆಚ್ಚದ ಚೆಕ್ಕುಗಳಿಗೆ ರುಜು ಮಾಡಿ, ಇನ್ನು ಕೆಲವು ಚೆಕ್ಕುಗಳಿಗೆ ರುಜು ಮಾಡಲು ನಿರಾಕರಿಸಿರುತ್ತಾರೆ. ನರೇಗಾ ಯೋಜನೆಗಳಿಗೆ ಮತ್ತು ಪ್ರಿಯಾ ಸಾಫ್ಟ್ ಲಾಗಿನ್ ತೆರೆಯಲು ಡೊಂಗಲ್ ಕೀ ಆಪರೇಟ್ ಮಾಡಲು ನಿರಾಕರಿಸಿರುತ್ತಾರೆ. ಗ್ರಾಮ ಪಂಚಾಯಿತಿಯ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು. ವಿದ್ಯುತ್ ಬೀದಿ ದೀಪ, ನೈರ್ಮಲ್ಯೀಕರಣ ಹಾಗೂ ಸಿಬ್ಬಂದಿ ವೇತನ ಖರ್ಚು ವೆಚ್ಚ ಪಾವತಿಸಲು ನಿರಾಕರಿಸಿರುತ್ತಾರೆ. ಇದರಿಂದ ಗ್ರಾಮ ಪಂಚಾಯಿತಿಯ ಆಡಳಿತ ನಡೆಸಲು ತೊಂದರೆ ಉಂಟಾಗಿದೆ, ಅಲ್ಲದೇ ಸದರಿಯವರು ಗ್ರಾಮ

ಪಂಚಾಯಿತಿ ಸಿಬ್ಬಂದಿಗಳ ಮೇಲೆ ವೈಯಕ್ತಿಕ ದ್ವೇಷ ಸಾಧಿಸಿ ಗ್ರಾಮ ಪಂಚಾಯಿತಿ ಕಾರ್ಯಗಳಿಗೆ ತೊಂದರೆ ಉಂಟು ಮಾಡಿರುವುದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಫಕೀರಬೂದಿಹಾಳ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ ಬಾದಾಮಿ ಇವರ ವರದಿಯಲ್ಲಿ ಕಂಡು ಬಂದಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ 43(ಎ), 48(4) ಮತ್ತು 48(5) ರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರುಗಳು ಹಾಗೂ ಸದಸ್ಯರುಗಳ ಮೇಲಿನ ಆರೋಪಗಳಿಗೆ ವಿಚಾರಣೆ ನಡೆಸಲು ಮೇಲೆ ಕ್ರಮಾಂಕ (2)ರಲ್ಲಿ ಪ್ರಾದೇಶಿಕ ಆಯುಕ್ತರುಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದ್ದು, ಅದರನ್ವಯ ಸದರಿ ಪ್ರಕರಣದ ವಿಚಾರಣೆ ನಡೆಸಿ, ಸರ್ಕಾರಕ್ಕೆ ಸಲ್ಲಿಸುವಂತೆ ಮೇಲೆ ಓದಲಾದ ಕ್ರಮಾಂಕ (3)ರ ಪತ್ರದಲ್ಲಿ ಈ ಪ್ರಕರಣವನ್ನು ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ರವರಿಗೆ ವಹಿಸಲಾಗಿತ್ತು.

ಅದರಂತೆ, ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರು ಈ ಪ್ರಕರಣದ ವಿಚಾರಣೆ ನಡೆಸಿ, ಎದುರುದಾರರಾದ ಶ್ರೀಮತಿ ಯಲ್ಲವ್ವ ಸತ್ಯಪ್ಪ ಚೂರಿ ರವರು ತಮ್ಮ ಅಧಿಕಾರಾವಧಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿದ್ದು, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ರನ್ವಯ ಕ್ರಮ ಜರುಗಿಸಬಹುದಾಗಿ, ಅಭಿಪ್ರಾಯಪಟ್ಟು ಮೇಲೆ ಓದಲಾದ ಕ್ರಮಾಂಕ (4)ರಲ್ಲಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ.

ಪ್ರಾದೇಶಿಕ ಆಯುಕ್ತರ ಅಭಿಪ್ರಾಯದನ್ವಯ ಕ್ರಮವಹಿಸುವ ಪೂರ್ವದಲ್ಲಿ ಶ್ರೀಮತಿ ಯಲ್ಲವ್ವ ಸತ್ಯಪ್ಪ ಚೂರಿ, ಮೇಲೆ ಓದಲಾದ ಕ್ರಮಾಂಕ (5)ರಲ್ಲಿ ಎರಡನೇ ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿದ್ದು, ಮೇಲೆ ಓದಲಾದ ಕ್ರಮಾಂಕ(6) ರಲ್ಲಿ ಕೆಳಕಂಡಂತೆ ಲಿಖಿತ ಸಮಜಾಯಿಷಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

“ ಗ್ರಾಮ ಪಂಚಾಯಿತಿಯ ಸಿಬ್ಬಂದಿಗಳ ವೇತನ ಪಾವತಿಗೆ ಸಂಬಂಧಿಸಿದಂತೆ ನನ್ನಿಂದ ಯಾವುದೇ ಲೋಪವಾಗಿರುವುದಿಲ್ಲ. ಗ್ರಾಮ ಪಂಚಾಯಿತಿಯ ಹಣಕಾಸಿನ ಸ್ಥಿತಿಗತಿಗಳ ಬಗ್ಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ನನಗೆ ಸರಿಯಾದ ಮಾಹಿತಿ ನೀಡದ ಕಾರಣ ಕೆಲವೊಂದು ಸಾರಿ ವಿಳಂಬಕ್ಕೆ ಕಾರಣವಾಗಿದೆ. ಸದರಿ ಗ್ರಾಮ ಪಂಚಾಯಿತಿ ಸಿಬ್ಬಂದಿ ವೇತನದ ವಿಳಂಬದಲ್ಲಿ ಯಾವುದೇ ರೀತಿಯ ದುರುದ್ದೇಶವಾಗಿರುವುದಿಲ್ಲ.

ಮುಂದುವರಿದು ಗ್ರಾಮ ಪಂಚಾಯಿತಿಯ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತ್ ನಿಂದ ತನಿಖೆ ನಡೆಸಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮೇಲೆ ಹಣ ದುರುಪಯೋಗಕ್ಕೆ ಸಂಬಂಧಿಸಿದಂತೆ ಮತ್ತು ಓಂಬುಡ್ಸ್‌ಮನ್ ರವರಿಂದ ತನಿಖೆ ನಡೆಸಿ ಗ್ರಾಮ ಪಂಚಾಯಿತಿಯ ಕರವಸೂಲಾತಿಯಲ್ಲಿ ನಡೆದ ಅವ್ಯವಹಾರದ ಬಗ್ಗೆ ವರದಿ ನೀಡಿರುತ್ತಾರೆ. ಸದರಿ ಎಲ್ಲಾ ದುರುಪಯೋಗದ ಬಗ್ಗೆ ನಾನು ಸರ್ಕಾರಕ್ಕೆ ಪತ್ರ ಬರೆದಿರುತ್ತೇನೆ. ಹಾಗಾಗಿ ನನ್ನಿಂದ ಯಾವುದೇ ಹಣ ದುರುಪಯೋಗವಾಗಿಲ್ಲವೆಂದು ತಿಳಿಸಿರುತ್ತಾರೆ.

ನಾನು ಅವಿದ್ಯಾವಂತಳಾಗಿದ್ದು ಸರ್ಕಾರದ ಹಣ ದುರುಪಯೋಗವಾಗಬಾರದೆಂದು ನನ್ನ ಮಕ್ಕಳಲ್ಲಿ ವಿಚಾರಣೆ ಮಾಡಿ ಸಹಿ ಮಾಡಿರುತ್ತೇನೆ. ಆದರೆ ನಾನು ಉದ್ದೇಶಪೂರಕವಾಗಿ ಯಾವುದೇ ಕಾಲವಿಳಂಬ ಮಾಡಿರುವುದಿಲ್ಲ. ನಾನೇ ಖುದ್ದಾಗಿ ಕಾಮಗಾರಿಗಳನ್ನು ಪರಿಶೀಲಿಸಿ ಹಣ ಪಾವತಿ ಮಾಡಿರುತ್ತೇನೆಂದು ತಿಳಿಸುತ್ತಾ ನನ್ನ ಮೇಲೆ ಮಾಡಿದ ಆರೋಪಗಳಿಂದ ಮುಕ್ತಗೊಳಿಸುವಂತೆ ಕೋರಿರುತ್ತಾರೆ.”

ಎದುರುದಾರರಿಗೆ ಅಹವಾಲು ಹೇಳಿಕೊಳ್ಳಲು ಅವಕಾಶವನ್ನು ನೀಡಲು ನಿರ್ಣಯಿಸಿ, ಮೇಲೆ ಓದಲಾದ ಕ್ರಮಾಂಕ(7) ರಲ್ಲಿ ವಿಚಾರಣಾ ನೋಟಿಸ್ಸನ್ನು ಜಾರಿ ಮಾಡಿ ಪ್ರಕರಣವನ್ನು ದಿನಾಂಕ: 21.01.2021 ರಂದು ಪ್ರಧಾನ ಕಾರ್ಯದರ್ಶಿಯವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡಿಸಲಾಗಿದೆ.

ಎದುರುದಾರರಾದ ಶ್ರೀಮತಿ ಯಲ್ಲವ್ವ ಸತ್ಯಪ್ಪ ಚೂರಿ, ಅಧ್ಯಕ್ಷರು ರವರು ಸದರಿ ವಿಚಾರಣೆಗೆ ಹಾಜರಾಗಿ ತನಗೆ ಕಣ್ಣಿನ ಶಸ್ತ್ರ ಚಿಕಿತ್ಸೆಯಾಗಿರುವುದರಿಂದ ಪಾವತಿ ವಿಳಂಬವಾಗಿರುವುದಾಗಿ ತಿಳಿಸಿದ್ದು, ಉದ್ದೇಶಪೂರ್ವಕವಾಗಿ ವಿಳಂಬ ಮಾಡಿರುವುದಿಲ್ಲ ಎಂಬುವುದಾಗಿ ಹೇಳಿಕೆ ನೀಡಿರುತ್ತಾರೆ ಹಾಗೂ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಹ ಸದರಿ ವಿಷಯವನ್ನು ಒಪ್ಪಿಕೊಂಡಿರುತ್ತಾರೆ. ಮುಂದುವರೆದು ಶ್ರೀಮತಿ ಯಲ್ಲವ್ವ ಸತ್ಯಪ್ಪ ಚೂರಿ, ಇವರಿಗೆ ತಮ್ಮದೇನಾದರು ಹೇಳಿಕೆ ಇದ್ದಲ್ಲಿ, ದಾಖಲಿಸಿಕೊಳ್ಳುವುದಾಗಿ ಕೋರಲಾಗಿ ಸದರಿಯವರು ತಮ್ಮ ಹೇಳಿಕೆ ಏನು ಇಲ್ಲವೆಂದು, ನನ್ನ ಸಮಜಾಯಿಸಿಯನ್ನು ಪರಿಗಣಿಸಿ ತನ್ನನ್ನು ಆರೋಪ ಮುಕ್ತಾಗೊಳಿಸಬೇಕೆಂದು ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬಾಗಲಕೋಟೆ ಜಿಲ್ಲೆ ಇವರು ಸಲ್ಲಿಸಿರುವ ದಾಖಲೆಗಳು, ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರ ವರದಿಯನ್ನು ಹಾಗೂ ಎದುರುದಾರರಾದ ಶ್ರೀಮತಿ ಯಲ್ಲವ್ವ ಸತ್ಯಪ್ಪ ಚೂರಿ, ಇವರ ಹೇಳಿಕೆಯನ್ನು ಪರಿಶೀಲಿಸಲಾಗಿದೆ. ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿರವರು ಪ್ರಕರಣದ ವಿಚಾರಣೆ ನಡೆಸಿ, ಸದರಿ ಪ್ರಕರಣದ ವಿಚಾರಣೆ ಕಾಲಕ್ಕೆ ವಾದ / ಪ್ರತಿವಾದಗಳನ್ನು ಹಾಗೂ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹೇಳಿಕೆಗಳನ್ನು ಮತ್ತು ಪ್ರಕರಣದಲ್ಲಿ ಲಭ್ಯವಿದ್ದ ದಾಖಲೆಗಳನ್ನು ಗಣನೆಗೆ ತೆಗೆದುಕೊಳ್ಳಲಾಗಿದ್ದು, ಸದರಿ ಪ್ರಕರಣದಲ್ಲಿ ಆರೋಪಿಸಲಾದಂತೆ ಉದ್ದೇಶಪೂರ್ವಕವಾಗಿ ಸಿಬ್ಬಂದಿಗಳ ವೇತನವನ್ನು ಹಾಗೂ ಪಂಚಾಯಿತಿಯ ಇತರೆ ಪಾವತಿಗಳನ್ನು ತಡೆಹಿಡಿದಿರುವಲ್ಲಿ ಆರೋಪಿಯ ಪ್ರಮುಖ ಪಾತ್ರವಿರುವ ಬಗ್ಗೆ ನಿಸ್ಸಂದೇಹವಾಗಿ ಸಾಬೀತಾಗಿರುತ್ತದೆ ಎಂದು ವರದಿಯಲ್ಲಿ ವಿವರವಾದ ಅಂಶಗಳೊಂದಿಗೆ ತಿಳಿಸಿದ್ದು, ಆಪಾದಿತ ಅಧ್ಯಕ್ಷರಾದ ಶ್ರೀಮತಿ ಯಲ್ಲವ್ವ ಸತ್ಯಪ್ಪ ಚೂರಿ ರವರ ಹೇಳಿಕೆಯನ್ನು ಒಪ್ಪಲು ಸಾಧ್ಯವಿಲ್ಲ. ಆದುದರಿಂದ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi) ರಡಿ ಬಾಗಲಕೋಟಿ ಜಿಲ್ಲೆ, ಬಾದಾಮಿ ತಾಲ್ಲೂಕು, ಫಕೀರಬೂದಿಹಾಳ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ನಿರ್ಧರಿಸಿ,

ಅದರಂತೆ ಈ ಕೆಳಕಂಡ ಆದೇಶ

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 300 ಗ್ರಾಪಂಅ 2020, ಬೆಂಗಳೂರು, ದಿನಾಂಕ: 17.04.2021.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಯಲ್ಲವ್ವ ಸತ್ಯಪ್ಪ ಚೂರಿ, ಹಿಂದಿನ ಅಧ್ಯಕ್ಷರು, ಫಕೀರಬೂದಿಹಾಳ ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ಇವರ ವಿರುದ್ದದ ಅಧಿಕಾರ ದುರುಪಯೋಗಪಡಿಸಿಕೊಂಡಿರುವ ಆರೋಪವು ಸಾಬೀತಾಗಿದ್ದು, ಸದರಿಯವರು ಪ್ರಸ್ತುತ ಗ್ರಾಮ ಪಂಚಾಯಿತಿಯ ಸದಸ್ಯರಲ್ಲದ ಕಾರಣ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi) ರಡಿ ಇವರನ್ನು ಸದರಿ ಅಧಿನಿಯಮದ 12(ಎಲ್) ರನ್ವಯ ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 17/04/21
(ನವೀನ್‌ಕುಮಾರ್ ಬಿ.)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.(ಜಿ.ಪಂ)

17/04/21

**<u>ಗೆ:</u>**

1) ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ.

..4

2) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಬಾಗಲಕೋಟೆ ಜಿಲ್ಲೆ.
3) ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ಬಾದಾಮಿ, ಬಾಗಲಕೋಟೆ ಜಿಲ್ಲೆ.
4) ಪಂಚಾಯಿತಿ ಅಭಿವೃದ್ದಿ ಅಧಿಕಾರಿ, ಫಕೀರಬೂದಿಹಾಳ ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.
5) ಶ್ರೀಮತಿ ಯಲ್ಲವ್ವ ಸತ್ಯಪ್ಪ ಚೂರಿ, ಹಿಂದಿನ ಅಧ್ಯಕ್ಷರು, ಫಕೀರಬೂದಿಹಾಳ ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ. (ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಬಾದಾಮಿ, ಬಾಗಲಕೋಟೆ ಜಿಲ್ಲೆ ಇವರ ಮುಖಾಂತರ)
6) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.